**ದಿನಾಂಕ :19–07–2021 ರಂದು ಸೋಮವಾರ ಮಧ್ಯಾಹ್ನ 03:00 ಗಂಟೆಗೆ ಅನ್ನಸಂದ್ರ ಪಾಳ್ಯದ, ಬಿ.ಬಿ.ಎಂ.ಪಿ ಯೋಗ ಸೆಂಟರ್‌ನಲ್ಲಿ ವಾರ್ಡ್ ಸಂಖ್ಯೆ:87ರ, ಶ್ರೀ.ವಿಜಯ ಕುಮಾರ್ ಸಹಾಯಕ ಕಾರ್ಯಪಾಲಕ ಅಭಿಯಂತರರು (Nodel Officer) ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.**

**ಹಾಜರಿದ್ದ ಅಧಿಕಾರಿಗಳು :**

| | |
|---|---|
| 1. | ಶ್ರೀ.ಜಿ.ಡಿ.ಸೋಮಯ್ಯ (ಸಹಾಯಕ ಅಭಿಯಂತರರು) |
| 2. | ಶ್ರೀ. ರಂಗನಾಥ, ಕಿರಿಯ ಆರೋಗ್ಯ ಪರಿವೀಕ್ಷಕರು |
| 3. | ಶ್ರೀ.ಎಸ್. ರಮೇಶ್ |
| 4 | ಶ್ರೀ. ಎಂ.ಎಸ್. ಮಂಜುನಾಥ್ |
| 5 | ಶ್ರೀ. ನಾವಜ್ ಫಾಷ |
| 6 | ಶ್ರೀ. ಎಂ.ದರ್ಶನ್ ಸ್ವರೂಪ್ |
| 7 | ಶ್ರೀ. ಬಿ.ಸಿ.ಮುರುಗ |
| 8 | ಶ್ರೀ.ಎಂ. ಮಂಜುನಾಥ್ |
| 9 | ಶ್ರೀ. ಲಕ್ಷ್ಮಣ್ |
| 10 | ಶ್ರೀ. ನರಸಿಂಹಮೂರ್ತಿ |
| 11 | ನಿವಾಸಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು |

ಮಾನ್ಯ ಅಧ್ಯಕ್ಷರು ಹಾಜರಿದ್ದ ಅಧಿಕಾರಿಗಳು, ವಾರ್ಡ್ ಸಮಿತಿ ಸದಸ್ಯರು ಹಾಗೂ ರೆಸಿಡೆಂಟ್ಸ್ ವೆಲ್ಫೇರ್ ಆಸೋಸಿಯೆಷನ್‌ನ ಅಧ್ಯಕ್ಷರುಗಳು, ಪ್ರತಿನಿಧಿಗಳು ಹಾಗೂ ಸಾರ್ವಜನಿಕರನ್ನು ಸಭೆಗೆ ಸ್ವಾಗತಿಸುತ್ತಾ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

ಈ ಹಿಂದೆ ನಡೆದ ಸಭೆಯ ನಡವಳಿಗಳನ್ನು ಓದಿ ರೆಕಾರ್ಡ್ ಮಾಡಲಾಯಿತು.

1. **ಕೋವಿಡ್–19 ಸಾಂಕ್ರಮಿಕ ರೋಗಕ್ಕೆ ಸಂಬಂಧಿಸಿದಂತೆ, ಸಂಬಾವ್ಯ ಮೂರನೇ ಅಲೆಯನ್ನು ನಿಯಂತ್ರಿಸುವ ಬಗ್ಗೆ ಮತ್ತು ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ.**

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ಗೆ ಸಂಬಂಧಿಸಿದ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯ ಅಧಿಕಾರಿಗಳು ವಾರ್ಡ್‌ನಲ್ಲಿ ಕೋವಿಡ್–19 ಸಂಬಾವ್ಯ ಮೂರನೇ ಅಲೆಗ್ಗೆ ಸಂಬಂಧಪಟ್ಟ ಸೋಂಕು ಹರಡುವುದನ್ನು ತಡೆಗಟ್ಟುವ ಎಲ್ಲಾ ಮುಂಜಾಗ್ರುತ ಕ್ರಮಗಳನ್ನು ತೆಗೆದುಕೊಳ್ಳುತ್ತಿರುವುದಾಗಿ ತಿಳಿಸಿರುತ್ತಾರೆ, ಆರೋಗ್ಯ ಅಧಿಕಾರಿಗಳು ಕೋವಿಡ್ ಲಸಿಕೆಯನ್ನು ಫ್ರಂಟ್ ಲೈನ್ ವಾರಿಯರ್ಸ್‌ಗೆ ನೀಡುತ್ತಿದ್ದು ಅತೀ ಶೀಘ್ರವಾಗಿ ಜನ ಸಾಮಾನ್ಯರಿಗೆ ನೀಡುವುದಾಗಿ ತಿಳಿಸಿರುತ್ತಾರೆ. ಈ ಬಗ್ಗೆ ಸೋಂಕು ಹರಡುವುದನ್ನು ತಡೆಗಟ್ಟುವ ಸಲುವಾಗಿ

ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಮತ್ತು ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

2. **ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ**

ವಾರ್ಡ್ ವ್ಯಾಪ್ತಿಯ ರೆಡ್ಡಿಪಾಳ್ಯದಲ್ಲಿ ಒಳ ಚರಂಡಿ ದುರಸ್ಥಿಗೊಂಡಿದ್ದು ಹೊಸ ಒಳಚರಂಡಿ ಅಳವಡಿಸಲು ಕೋರಿರುತ್ತಾರೆ. ಸದರಿ ಕಾಮಗಾರಿಗಳನ್ನು ಕೂಡಲೇ ಕೈಗೊಂಡು ಪೂರ್ಣಗೊಳಿಸಿ ನಿವಾಸಿಗಳ ಸಮಸ್ಯೆಗಳನ್ನು ಬಗೆಹರಿಸುವಂತೆ ಸಂಬಂಧಪಟ್ಟ ಬಿ.ಡಬ್ಲ್ಯು.ಎಸ್.ಎಸ್.ಬಿ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

3. **ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ :-**

ವಾರ್ಡ್‌ನ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲಾಗಿದ್ದು ಜಗದೀಶ್ ನಗರದಲ್ಲಿ ಚರಂಡಿಯ ಹೊಳೆತ್ತಲು ಕೋರಿರುತ್ತಾರೆ. ಸದರಿ ಕಾಮಗಾರಿಯನ್ನು ಕೈಗೊಳ್ಳುವಂತೆ ಸಭೆಯಲ್ಲಿ ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.

4. **ಬೀದಿ ದೀಪಗಳ ನಿರ್ವಹಣೆ ಬಗ್ಗೆ:-**

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಬೀದಿ ದೀಪಗಳ ಸಮರ್ಪಕವಾಗಿ ನಿರ್ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

5. **ವಿದ್ಯುತ್ ಸರಬರಾಹು (ಬೆಸ್ಕಾಂ)ಗೆ ಸಂಬಂದಿಸಿದ ವಿಷಯದ ಬಗ್ಗೆ:-**

ಈ ಕುರಿತು ಶ್ರೀ. ಎಂ.ಎಸ್. ಮಂಜುನಾಥ್ ರವರು ಮಾತನಾಡಿ ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್ ವ್ಯಾಪ್ತಿಯ 3ನೇ ಮುಖ್ಯರಸ್ತೆ ಜಗದೀಶ್ ನಗರದಲ್ಲಿ .ವಿದ್ಯುತ್ ಕಂಬ ಹಾಳಾಗಿದ್ದು ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, .ವಿದ್ಯುತ್ ಕಂಬವನ್ನು ತೆಗೆದು ಹೊಸ ಕಂಬವನ್ನು ಅಳವಡಿಸಲು ಕೋರಿರುತ್ತಾರೆ.

ಕ್ರಮ: ಬೆಸ್ಕಂ ಅಧಿಕಾರಿ

6. **ಹೆಚ್.ಎ.ಎಲ್ ಮಾರುಕಟ್ಟೆಯಲ್ಲಿ ಮಾಸ್ಕ್ ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಕ್ರಮದ ಬಗ್ಗೆ.**

ಈ ಕುರಿತು ಶ್ರೀ. ಎಸ್. ರಮೇಶ್ ರವರು ಮಾತನಾಡಿ ಹೆಚ್.ಎ.ಎಲ್ ಮಾರುಕಟ್ಟೆಯಲ್ಲಿ ಮಾಸ್ಕ್ ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳುವ ವಿಷಯದ ಬಗ್ಗೆ ಚರ್ಚಿಸಲಾಗಿದೆ, ಸಾಮಾಜಿಕ ಅಂತರ ಮತ್ತು ಮಾಸ್ಕ್ ದರಿಸದ ಸಾರ್ವಜನಿಕರಿಗೆ ತಿಳುವಳಿಕೆ ನೀಡಲು ಮತ್ತು ಕೋವಿಡ್ ನಿಯಮಗಳನ್ನು ಪಾಲಿದವರ ವಿರುದ್ಧ ದಂಡ ವಿದಿಸಲು ಸೂಚಿಸಲಾಯಿತು.

ಕ್ರಮ:ಆರೋಗ್ಯ ಅಧಿಕಾರಿ

7. **ಜಗದೀಶ್ ನಗರ ಮತ್ತು ಜೋತಿ ನಗರದಲ್ಲಿ ಕುಡಿಯುವ ನೀರಿನ ತೊಂದರೆ ಕ್ರಮದ ಬಗ್ಗೆ.**

ಈ ಕುರಿತು ಶ್ರೀ. ಎಂ.ಎಸ್. ಮಂಜುನಾಥ್ ರವರು ಮಾತನಾಡಿ ಜಗದೀಶ್ ನಗರ ಮತ್ತು ಜೋತಿ ನಗರದಲ್ಲಿ ಕುಡಿಯುವ ನೀರಿನ ತೊಂದರೆ ವಿಷಯದ ಬಗ್ಗೆ ಚರ್ಚಿಸಲಾಗಿದೆ, ಕುಡಿಯುವ ನೀರು ಬಿಟ್ಟಾಗ ಎಲ್ಲಾ ಮನೆಗಳಿಗೆ ಸಮವಾಗಿ ಬರುವುದಿಲ್ಲವೆಂದು ತಿಳಿಸಿರುತ್ತಾರೆ.ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ :ಬಿ.ಡಬ್ಲ್ಯೂ.ಎಸ್.ಎಸ್.ಬಿ, ಅಧಿಕಾರಿ ಶ್ರೀ.ನರಸಿಂಹಮೂರ್ತಿ ರವರು ಮಾತನಾಡಿ, ಮುಂದಿನ ಗುರುವಾರ ನೀರು ಬಿಟ್ಟಾಗ ಸ್ಥಳ ಪರಿಶೀಲನೆ ನಡೆಸಿ ಸೂಕ್ತ ಕ್ರಮವಹಿಸಲಾಗುವುದೆಂದು ತಿಳಿಸಿರುತ್ತಾರೆ.

ಕ್ರಮ:ಬಿ.ಡಬ್ಲ್ಯೂ.ಎಸ್.ಎಸ್.ಬಿ, ಅಧಿಕಾರಿ

8. **ಬೀದಿ ನಾಯಿಗಳ ಹಾವಳಿಯ ತಡೆಗಟ್ಟುವ ಕ್ರಮದ ಬಗ್ಗೆ.**

ಈ ಕುರಿತು ಶ್ರೀ. ಎಂ.ಎಸ್. ಮಂಜುನಾಥ್ ರವರು ಮಾತನಾಡಿ ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್ ವ್ಯಾಪ್ತಿಯ 4ನೇ ಅಡ್ಡರಸ್ತೆ, 3ನೇ ಮುಖ್ಯರಸ್ತೆಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಬೀದಿ ನಾಯಿಗಳ ಹಾವಳಿ ನಿಯಂತ್ರಣ ಮಾಡಬೇಕೆಂದು ಕೋರಿರುತ್ತಾರೆ.

ಕ್ರಮ: ಪಶು ವೈದ್ಯ ಅಧಿಕಾರಿ ಬಿ.ಬಿ.ಎಂ.ಪಿ

9. **ವಿಭೂತಿಪುರ ಕೆರೆಯ ರಸ್ತೆಯಲ್ಲಿ ಅನ್ಯೆತಿಕ ಚಟುವಟಿಕೆಗಳು ನಡೆಯುತ್ತಿದ್ದು ಅದರ ಕ್ರಮದ ಬಗ್ಗೆ.**

ಈ ಕುರಿತು ಸಾರ್ವನಿಕರು ಮಾತನಾಡಿ ಹೆಚ್.ಎ.ಎಲ್ ಏರ್‌ಪೋರ್ಟ್ ವಾರ್ಡ್ ವ್ಯಾಪ್ತಿಯ ವಿಭೂತಿಪುರ ಕೆರೆಯ ರಸ್ತೆಯಲ್ಲಿ ಸಂಜೆ ವೇಳೆಯಲ್ಲಿ ಅನ್ಯೆತಿಕ ಚಟುವಟಿಕೆಗಳು ನಡೆಯುತ್ತಿದ್ದು ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಕೋರಿರುತ್ತಾರೆ.ಈ ಬಗ್ಗೆ ಪೋಲಿಸ್ ಠಾಣೆಗೆ ಪತ್ರವನ್ನು ಬರೆದು ಕ್ರಮಕೈಗೊಳ್ಳುವಂತೆ ಸೂಚಿಸಲಾಯಿತು.

ಕ್ರಮ: ವಾರ್ಡ್ ಕಾರ್ಯದರ್ಶಿ ಹಾಗೂ ಪೋಲಿಸ್ ಅಧಿಕಾರಿಗಳು

ಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು
ವಾರ್ಡ್ ನಂ.87 ಹೆಚ್.ಎ.ಎಲ್ ಏರ್‌ಪೋರ್ಟ್

ವಾರ್ಡ್ ಸಮಿತಿ ಅಧ್ಯಕ್ಷಕರು ಹಾಗೂ
ನೋಡೆಲ್ ಅಧಿಕಾರಿಗಳು
ಸಹಾಯಕ ಕಾರ್ಯಪಾಲಕ ಅಭಿಯಂತರರು
ಹೆಚ್.ಎ.ಎಲ್. ಏರ್‌ಪೋರ್ಟ್ ಉಪ ವಿಭಾ
ವಿಭೂತಿಪುರ, ಬೆಂಗಳೂರು - 37

**ಪ್ರತಿಯನ್ನು:**

1. ಮಾನ್ಯ ಜಂಟಿ ಆಯುಕ್ತರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
2. ಮುಖ್ಯ ಅಭಿಯಂತರರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
3. ಕಛೇರಿ ಪ್ರತಿ.